ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2015-16ನೇ ಸಾಲಿನಿಂದ ಜಿ.ಎನ್.ಎಂ, ಬಿ.ಎಸ್ಸಿ. ನರ್ಸಿಂಗ್ ಹಾಗೂ ಪ್ಯಾರಾಮೆಡಿಕಲ್ ಕೋರ್ಸ್‌ಗಳಿಗೆ ತರಬೇತಿ ಶುಲ್ಕ, ತರಬೇತಿ ಭತ್ಯೆ ಹಾಗೂ ಇತರೆ ಶುಲ್ಕಗಳನ್ನು ಇ-ಪಾಸ್ ಮೂಲಕ ಪಾವತಿಸುವ ಕುರಿತು.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 85 ಎಸ್‌ಎಲ್‌ಪಿ 2009(ಭಾ), ಬೆಂಗಳೂರು, ದಿನಾಂಕ: 16.07.2010.
2. ಸರ್ಕಾರದ ಆದೇಶ ಸಂಖ್ಯೆ: ಸಕಇ 85 ಎಸ್‌ಎಲ್‌ಪಿ 2009(ಭಾ), ಬೆಂಗಳೂರು, ದಿನಾಂಕ: 03.12.2010.
3. ಸರ್ಕಾರದ ಆದೇಶ ಸಂಖ್ಯೆ: ಸಕಇ 96 ಬಿಎಂಎಸ್ 2011, ದಿನಾಂಕ: 22.09.2011.
4. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 612 ಬಿಎಂಎಸ್ 2013, ಬೆಂಗಳೂರು, ದಿನಾಂಕ: 07.11.2013.
5. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಏಕ ಕಡತದಲ್ಲಿ ಸಲ್ಲಿಸಿರುವ ಪ್ರಸ್ತಾವನೆ ಸಂಖ್ಯೆ: ಹಿಂವಕಇ/ತರಬೇತಿ/ನರ್ಸಿಂಗ್/ಸಿಆರ್-1/2014-15, ದಿನಾಂಕ:29.06.2015.

*****

ಮೇಲೆ ಓದಲಾದ (1) ರ ಸರ್ಕಾರದ ಆದೇಶದಲ್ಲಿ ಇಂಡಿಯನ್ ನರ್ಸಿಂಗ್ ಕೌನ್ಸಿಲ್ (ಐ.ಎನ್.ಸಿ) ನಿಂದ ಮಾನ್ಯತೆ ಪಡೆದ ಶಾಲೆ/ಕಾಲೇಜುಗಳಿಗೆ ಜಿ.ಎನ್.ಎಂ. ಮತ್ತು ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ತರಬೇತಿ ನೀಡಲು ಮಂಜೂರಾತಿ ನೀಡಿ, ಮೇಲೆ ಓದಲಾದ (2) ರ ಸರ್ಕಾರದ ಆದೇಶದಲ್ಲಿ ತರಬೇತಿ ಶುಲ್ಕ, ಶಿಷ್ಯವೇತನ ಹಾಗೂ ಇತರೆ ಶುಲ್ಕಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (3) ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ಸರ್ಕಾರದ ಪ್ಯಾರಾ ಮೆಡಿಕಲ್ ಬೋರ್ಡ್‌ನಿಂದ ಮಾನ್ಯತೆ ಪಡೆದ ವಿವಿಧ ಸಂಸ್ಥೆಗಳಲ್ಲಿ ಸರ್ಕಾರಿ ಕೋಟಾಕ್ಕೆ ಲಭ್ಯವಿರುವ ಸೀಟುಗಳ ಮಾಹಿತಿ ಪಡೆದುಕೊಂಡು, ವಿದ್ಯಾರ್ಥಿಗಳನ್ನು ಕೌನ್ಸಿಲಿಂಗ್ ಮುಖಾಂತರ ಆಯ್ಕೆ ಮಾಡಿ ನಿಯೋಜಿಸಲು ಹಾಗೂ ತರಬೇತಿ ಶುಲ್ಕ ಮತ್ತು ಇತರೆ ಶುಲ್ಕಗಳನ್ನು ನಿಗದಿಪಡಿಸಲಾಗಿದೆ.

ಮೇಲೆ ಓದಲಾದ (4) ರ ಸರ್ಕಾರದ ಆದೇಶದಲ್ಲಿ 2013-14ನೇ ಸಾಲಿನಿಂದ ಇಂಡಿಯನ್ ನರ್ಸಿಂಗ್ ಕೌನ್ಸಿಲ್‌ವತಿಯಿಂದ ಮಾನ್ಯತೆ ಪಡೆದ ನರ್ಸಿಂಗ್ ಶಾಲಾ/ಕಾಲೇಜುಗಳಲ್ಲಿ ಜಿ.ಎನ್.ಎಂ, ಬಿ.ಎಸ್ಸಿ. ನರ್ಸಿಂಗ್ ಕೋರ್ಸ್‌ಗಳಿಗೆ ಹಾಗೂ ಕರ್ನಾಟಕ ಪ್ಯಾರಾ ಮೆಡಿಕಲ್ ಬೋರ್ಡ್‌ನಿಂದ ಮಾನ್ಯತೆ ಪಡೆದ ಪ್ಯಾರಾ ಮೆಡಿಕಲ್ ಕೋರ್ಸ್‌ಗಳಿಗೆ ಪ್ರವೇಶವನ್ನು ಪಡೆದಿರುವ/ಪಡೆಯುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ತರಬೇತಿ ಶುಲ್ಕ ಮತ್ತು ಶಿಷ್ಯವೇತನವನ್ನು ಮೇಲೆ ಓದಲಾದ (2) ಮತ್ತು (3) ಆದೇಶಗಳನ್ವಯ ಪಾವತಿಸಲು ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (5) ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಪ್ರಸ್ತಾವನೆ ಸಲ್ಲಿಸಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಊಟ ಮತ್ತು ವಸತಿ ಸಹಾಯ ಯೋಜನೆ, ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಹಾಗೂ ಶುಲ್ಕ ವಿನಾಯಿತಿ ಕಾರ್ಯಕ್ರಮಗಳನ್ನು ಇ-ಪಾಸ್ ಮೂಲಕ ಅನುಷ್ಠಾನಗೊಳಿಸುತ್ತಿದ್ದು, ನರ್ಸಿಂಗ್ ತರಬೇತಿ ಕಾರ್ಯಕ್ರಮದ ತರಬೇತಿ ಶುಲ್ಕ, ಶಿಷ್ಯವೇತನ ಹಾಗೂ ಇತರೆ ಶುಲ್ಕಗಳನ್ನು manually ಮಂಜೂರು ಮಾಡುವ ಕಾರಣ ನರ್ಸಿಂಗ್ ವಿದ್ಯಾರ್ಥಿಗಳು ಎರಡೂ ಕಡೆ ಸೌಲಭ್ಯವನ್ನು ಪಡೆಯುವ

ಸಾಧ್ಯತೆಗಳಿದ್ದು, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ತರಬೇತಿಗಳಿಗೆ ಸಂಬಂಧಿಸಿದಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (1) ರಿಂದ (4) ಆದೇಶಗಳಲ್ಲಿರುವ ಷರತ್ತುಗಳಿಗೊಳಪಟ್ಟು, ಇ-ಪಾಸ್ ಮೂಲಕ ತರಬೇತಿ ಶುಲ್ಕ, ಶಿಷ್ಯವೇತನ ಹಾಗೂ ಇತರೆ ಶುಲ್ಕಗಳನ್ನು ಪಾವತಿಸಲು ಹಾಗೂ ಪ್ಯಾರಾಮೆಡಿಕಲ್ ಮಂಡಳಿಯಿಂದ ಅಂಗೀಕೃತವಾದ ಎಲ್ಲಾ ಕೋರ್ಸ್‌ಗಳಿಗೂ ತರಬೇತಿ ಶುಲ್ಕವನ್ನು ಪಾವತಿಸಲು ಸರ್ಕಾರದ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯು 768 ಬಿಎಂಎಸ್ 2015, ಬೆಂಗಳೂರು**
**ದಿನಾಂಕ:07-10-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2015-16 ನೇ ಸಾಲಿನಿಂದ ಜಿ.ಎನ್.ಎಂ, ಬಿ.ಎಸ್ಸಿ. ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಮಂಡಳಿಯಿಂದ ಅಂಗೀಕೃತಗೊಂಡ ಎಲ್ಲಾ ಕೋರ್ಸ್‌ಗಳ ವಿದ್ಯಾರ್ಥಿಗಳಿಗೆ ಇ-ಪಾಸ್ ಮೂಲಕ ತರಬೇತಿ ಶುಲ್ಕ, ಶಿಷ್ಯವೇತನ ಹಾಗೂ ಇತರೆ ಶುಲ್ಕಗಳನ್ನು ಈ ಕೆಳಕಂಡ ಆದೇಶಗಳಲ್ಲಿನ ನಿಬಂಧನೆಗೊಳಪಟ್ಟು ಪಾವತಿಸತಕ್ಕದೆಂದು ತಿಳಿಸಿ ಆದೇಶಿಸಿದೆ.

ಅ. ಸರ್ಕಾರದ ಆದೇಶ ಸಂಖ್ಯೆ: ಸಕಇ 85 ಎಸ್‌ಎಲ್‌ಪಿ 2009(ಭಾ), ಬೆಂಗಳೂರು, ದಿನಾಂಕ:16.07.2010.
ಆ. ಸರ್ಕಾರದ ಆದೇಶ ಸಂಖ್ಯೆ: ಸಕಇ 85 ಎಸ್‌ಎಲ್‌ಪಿ 2009(ಭಾ), ಬೆಂಗಳೂರು, ದಿನಾಂಕ:03.12.2010.
ಇ. ಸರ್ಕಾರದ ಆದೇಶ ಸಂಖ್ಯೆ: ಸಕಇ 96 ಬಿಎಂಎಸ್ 2011, ದಿನಾಂಕ:22.09.2011.
ಈ. ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 612 ಬಿಎಂಎಸ್ 2013, ಬೆಂಗಳೂರು, ದಿನಾಂಕ:07.11.2013.

ಇದಕ್ಕೆ ತಗಲುವ ವೆಚ್ಚವನ್ನು ತರಬೇತಿ, ಅರಿವು ಮತ್ತು ಪ್ರೋತ್ಸಾಹ ಕಾರ್ಯಕ್ರಮ ರಾಜ್ಯವಲಯ ಯೋಜನೆ ಲೆಕ್ಕ ಶೀರ್ಷಿಕೆ: 2225-03-277-2-37 ರಡಿ ಭರಿಸತಕ್ಕದ್ದು.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಎ & ಇ), ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಇಲ್ಯಾಣ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
5. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
6. ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು.

.....3

7. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
8. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
9. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
11. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.